ಮಂಗಳವಾರ 27.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 127
Digital Varthe Kannada Daily
Volume 01 - Issue 127
Tuesday, 27.01.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

# ಸ್ವಿಮ್ಮಿಂಗ್ ಪೂಲ್‌ನಲ್ಲಿ ಮಹಿಳೆಯ ಶವ ಪತ್ತೆ



**ರಾಮನಗರ:** ಅನುಮಾನಾಸ್ಪದ ರೀತಿಯಲ್ಲಿ ಗೃಹಿಣಿಯೋರ್ವರು ಮೃತಪಟ್ಟಿರುವ ಘಟನೆ ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರ ತಾಲೂಕಿನ ಬೆಟ್ಟೆಗೌಡನದೊಡ್ಡಿ ಗ್ರಾಮದಲ್ಲಿ ನಡೆದಿದೆ. ಪ್ರತಿಭಾ(32) ಮೃತ ದುರ್ದೈವಿಯಾಗಿದ್ದು, ಮನೆಯ ಸ್ವಿಮ್ಮಿಂಗ್ ಪೂಲ್‌ನಲ್ಲಿ ಮೃತದೇಹ ಪತ್ತೆಯಾಗಿದೆ. ಪತಿ ನಂಜೇಗೌಡನೇ ಆಕೆಯನ್ನು ಕೊಲೆ ಮಾಡಿರೋದಾಗಿ ಪ್ರತಿಭಾ ಕುಟುಂಬಸ್ಥರು ಆರೋಪಿಸಿದ್ದರೆ, ಅನಾರೋಗ್ಯದ ಹಿನ್ನೆಲೆ ಆಕೆಯೇ ಆತ್ಮಹತ್ಯೆ ಮಾಡಿಕೊಂಡಿರೋದಾಗಿ ನಂಜೇಗೌಡ ತಿಳಿಸಿದ್ದಾರೆ.

ಪರಸ್ಪರ ಪ್ರೀತಿಸಿದ್ದ ನಂಜೇಗೌಡ ಮತ್ತು ಪ್ರತಿಭಾ ಹದಿನಾಲ್ಕು ವರ್ಷದ ಹಿಂದೆ ವಿವಾಹವಾಗಿದ್ರು. ಇಬ್ಬರಿಗೂ ಮುದ್ದಾದ ಎರಡು ಗಂಡು ಮಕ್ಕಳು ಕೂಡ ಇದ್ದಾರೆ. ಇನ್ನು ನಂಜೇಗೌಡ ಕೋಡಿಗಳ್ಳಿ ಗ್ರಾಮದಲ್ಲಿ ತನ್ನದೇ ಆದ ಸಿಮೆಂಟ್ ಅಂಗಡಿಯೊಂದನ್ನು ಇಟ್ಟುಕೊಂಡಿದ್ದು, ಸಾಕಷ್ಟು ಸಿರಿವಂತ ಸಹ ಹೌದು. ಹೀಗಿರುವಾಗ ಇವತ್ತು ಬೆಳಿಗ್ಗೆ ಮೃತ ಪ್ರತಿಭಾಳ ಅಕ್ಕನ ಮನೆಯ ಬಳಿ ಬಂದು ಹೆಂಡತಿ ರೂಮ್ ಬಾಗಿಲು ತೆಗೆಯುತ್ತಿಲ್ಲ ಎಂದು ಹೇಳಿದ್ದಾರೆ. ಹೀಗಾಗಿ ತಕ್ಷಣ ಪ್ರತಿಭಾ ಸಹೋದರ ಪರಮೇಶ್, ಮನೆಗೆ ಹೋಗಿ ಮನೆಯನ್ನಲ್ಲ ಚೆಕ್ ಮಾಡಿದ್ದಾನೆ. ಈ ವೇಳೆ ಎಲ್ಲಿಯೂ ಆಕೆ ಕಂಡುಬಂದಿಲ್ಲ. ತಕ್ಷಣ ಮನೆಯ ಆವರಣದಲ್ಲಿ ಇದ್ದ ಸ್ವಿಮ್ಮಿಂಗ್ ಪೂಲ್‌ನಲ್ಲಿ ನೋಡಿದಾಗ ಮೃತದೇಹ ಪತ್ತೆಯಾಗಿದೆ.

ಅಂದಹಾಗೆ ನಂಜೇಗೌಡಗೆ ಪ್ರತಿಭಾ ಎರಡನೇ ಹೆಂಡತಿ. ಪ್ರಾರಂಭದಲ್ಲಿ ಇಬ್ಬರ ಸಂಸಾರ ಚೆನ್ನಾಗಿಯೇ ಇತ್ತು. ಎರಡನೇ ಪತ್ನಿ ಪ್ರತಿಭಾಗಾಗಿ ಗ್ರಾಮದ ಹೊರವಲಯದಲ್ಲಿ ಸುಂದರವಾದ ಮನೆಯೊಂದನ್ನೂ ನಂಜೇಗೌ ಕಟ್ಟಿಸಿಕೊಟ್ಟಿದ್ದರು. ಆದರೆ ಮೊದಲ ಹೆಂಡತಿ ವಿಚಾರವಾಗಿ ಇಬ್ಬರ ನಡುವೆ ಆಗಾಗ ಗಲಾಟೆ ಕೂಡ ನಡೆಯುತ್ತಿತ್ತು. ಈ ನಡುವೆ ನಿನ್ನೆ ರಾತ್ರಿ ಅದ್ಯಾವುದೋ ಕಾರಣಕ್ಕೆ ಮನೆಗೆ ಬಂದಿದ್ದ ತನ್ನ ಕುಟುಂಬಸ್ಥರನ್ನು ಕೂಡ ಪ್ರತಿಭಾ ಮನೆಗೆ ವಾಪಸ್ ಕಳುಹಿಸಿದ್ದರು. ಆನಂತರ ಏನು ನಡೆದಿದೆ ಎಂಬುದು ಗೊತ್ತಿಲ್ಲ. ಬೆಳಗ್ಗೆ ಎದ್ದು ನೋಡುವಷ್ಟರಲ್ಲಿ ಪ್ರತಿಭಾ ಮೃತದೇಹ ಸ್ವಿಮ್ಮಿಂಗ್ ಪೂಲ್‌ನಲ್ಲಿ ಪತ್ತೆಯಾಗಿದೆ.

ಇನ್ನು ಪ್ರತಿಭಾ ಪತಿ ನಂಜೇಗೌಡ ಆಕೆ ಹೊಟ್ಟೆನೋವು ಎನ್ನುತ್ತಿದ್ದಳು, ಹೀಗಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎನ್ನುತ್ತಿದ್ದಾರೆ. ಆದರೆ ಕುಟುಂಬಸ್ಥರು ಮಾತ್ರ ಇದು ಕೊಲೆ ಎಂದು ಆರೋಪಿಸಿದ್ದಾರೆ. ಒಟ್ಟಾರೆ ಪ್ರತಿಭಾ ಸಾವು ಸಾಕಷ್ಟು ಅನುಮಾನಕ್ಕೆ ಎಡೆಮಾಡಿಕೊಟ್ಟಿದ್ದು, ಮರಣೋತ್ತರ ಪರೀಕ್ಷೆ ವರದಿ ಬಂದ ನಂತರ ಸತ್ಯಾಂಶ ತಿಳಿಯಲಿದೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಕೋಡಿಹಳ್ಳಿ ಠಾಣೆ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಒಂದು ಗ್ರಾಮದ ಹೆಬ್ಬಾಗಿಲು ಆ ಊರಿನ ಇತಿಹಾಸದ ಪ್ರತೀಕ: ಶಾಸಕ ಎಸ್. ಮುನಿರಾಜು



**ಪೀಣ್ಯ ದಾಸರಹಳ್ಳಿ:** ಹಿಂದೆ ಗ್ರಾಮಗಳು ಇದ್ದಂತಹ ಕಾಲದಲ್ಲಿ ಊರಿನ ಹೆಬ್ಬಾಗಿಲು ಆ ಗ್ರಾಮದ ಇತಿಹಾಸ ಹೇಳುತ್ತಿದ್ದ ಊರಿನ ಗ್ರಾಮ ದೇವತೆ, ಅಲ್ಲಿನ ವಿಶೇಷ ಆಚಾರ ವಿಚಾರ, ಸಂಸ್ಕೃತಿ ಪ್ರತೀಕವಾಗಿ ಹೆಬ್ಬಾಗಿಲು ಇರುತ್ತಿತ್ತು' ಎಂದು ಶಾಸಕ ಎಸ್. ಮುನಿರಾಜು ತಿಳಿಸಿದರು.

**ನೆಲಗದರನಹಳ್ಳಿ ಮುಖ್ಯ ರಸ್ತೆಯ ಬೆಲ್ಮಾರ್ ಬಡಾವಣೆ ಹೆಬ್ಬಾಗಿಲು ಉದ್ಘಾಟಿಸಿ ಮಾತನಾಡಿದರು.**

ಸಂಸದೆ ಶೋಭಾ ಕರಂದ್ಲಾಜೆ ಮಾತನಾಡಿ,' ಒಂದು ಬಡಾವಣೆ ಎಂದರೆ ಅಲ್ಲಿ ಲಕ್ಷಾಂತರ ಮನೆಗಳಿರುತ್ತವೆ. ಅಲ್ಲಿ ಜಾತಿ, ಮತ, ಭೇದ ಭಾವ ವಿಲ್ಲದೆ ಎಲ್ಲರೂ ಒಗ್ಗಟ್ಟಾಗಿ ಐಕ್ಯತೆಯಿಂದ ಸಹಬಾಳ್ವೆ ನಡೆಸಬೇಕು. ಏನೇ ಸಮಸ್ಯೆಗಳಿದ್ದರೂ ಕೂಡ ಎಲ್ಲರೂ ಒಗ್ಗಟ್ಟಾಗಿ ಚರ್ಚಿಸಿ ಬಗೆಹರಿಸಿಕೊಳ್ಳುವ ಕೆಲಸ ಮಾಡಬೇಕು' ಎಂದರು.

ಇದೇ ವೇಳೆ ಊರಿನ ದೇವರಾದ ಆಂಜನೇಯ ಸ್ವಾಮಿಯನ್ನು ಕಲಾತಂಡಗಳೊಂದಿಗೆ ಮೆರವಣಿಗೆಗಳ ಮೂಲಕ ಗ್ರಾಮಕ್ಕೆ ಕರೆ ತರಲಾಯಿತು. ಗೋಪೂಜೆ ಮಾಡಿ ಬೆಲ್ಮಾರ್ ಬಡಾವಣೆಯ ಹೆಬ್ಬಾಗಿಲ ಪ್ರವೇಶಕ್ಕೆ ಟೇಪ್ ಕಟ್ ಮಾಡುವ ಮೂಲಕ ಶಾಸಕ ಎಸ್. ಮುನಿರಾಜು ಮತ್ತು ಸಂಸದೆ ಶೋಭಾ ಕರಂದ್ಲಾಜೆ ಅವರು ಉದ್ಘಾಟಿಸಿದರು. ಭಕ್ತಾದಿಗಳಿಗೆ ಅನ್ನದಾಸೋಹ ಮತ್ತು ಸಿಹಿ ವಿತರಿಸಲಾಯಿತು.

ಕಾರ್ಯಕ್ರಮದ ಆಯೋಜಕ ಸುರೇಶ್ ಗೌಡ, ವಿಜಯ್ ಕುಮಾರ್ ಮತ್ತು ಊರಿನ ಗ್ರಾಮಸ್ಥರು ಸಾರ್ವಜನಿಕರು ಇದ್ದರು

# CRPF ನಿಂದ AIPSCB ಟಿ-20 ಕ್ರಿಕೆಟ್ ಟೂರ್ನಮೆಂಟ್ ಆಯೋಜನೆ



**ಬೆಂಗಳೂರು:** ಯಲಹಂಕ ಮುಖ್ಯ ರಸ್ತೆ ಯಲ್ಲಿರುವ CRPF ಪೋಲೀಸ್ ತರಬೇತಿ ಕೇಂದ್ರದ ಸಭಾಂಗಣದಲ್ಲಿ ಎ ಐ ಪಿ ಎಸ್ ಸಿ ಬಿ ಟಿ-20 ಕ್ರಿಕೆಟ್ ಟೂರ್ನಮೆಂಟ್‌ನ ಲೋಗೋ ಮತ್ತು ಟೀಸರ್ ನ್ನು ಸಿ ಆರ್ ಪಿ ಎಫ್ ಪೋಲಿಸ್ ಮಹಾ ನಿರೀಕ್ಷಕ ಡಾ. ವಿಪುಲ್ ಕುಮಾರ್, ಸಿ ಆರ್‌ಪಿಎಫ್ ಡಿಐಜಿ ಪದ್ಮ ಕುಮಾರ್ ಹಾಗೂ ಪೋಲಿಸ್ ಉಪ ಆಯುಕ್ತ ಜಿ ಕೆ ಮಿಥುನ್ ಕುಮಾರ್ ಅನಾವರಣಗೊಳಿಸಿದರು.

ಈ ಕಾರ್ಯಕ್ರಮವನ್ನು AIPSCB ಟಿ-20 ಕ್ರಿಕೆಟ್ ಟೂರ್ನಮೆಂಟ್‌ನ ಆಯೋಜನಾ ಸಮಿತಿ, ಡಾ. ವಿಪುಲ್ ಕುಮಾರ್, ಐಪಿಎಸ್ ಅವರ ಸಮರ್ಥ ನಾಯಕತ್ವದಲ್ಲಿ ಆಯೋಜಿಸಿತ್ತು. CRPF ಗ್ರೂಪ್ ಸೆಂಟರ್, ಯಲಹಂಕ, ಕ್ಯಾಂಪಸ್‌ನೊಳಗಿನ ವಿವಿಧ ಸಂಸ್ಥೆಗಳು, ಕಚೇರಿಗಳು ಮತ್ತು ಘಟಕಗಳಿಂದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಿಬ್ಬಂದಿ ವರ್ಗದವರು ಸಮಾರಂಭದಲ್ಲಿ ಭಾಗವಹಿಸಿ ತಮ್ಮ ಸಂಪೂರ್ಣ ಬೆಂಬಲ ನೀಡಿದರು.

ಟಿ-20 ಕ್ರಿಕೆಟ್ ಟೂರ್ನಮೆಂಟ್ (ಝೋನ್-ಬಿ)**ನ ಪಂದ್ಯಗಳು ಜನವರಿ 28ರಿಂದ ಫೆಬ್ರವರಿ 01ರವರೆಗೆ ಬೆಂಗಳೂರು ನಗರದ ಆಲೂರಿನ ಕೆಎಸ್‌ಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿವೆ. ವಿವಿಧ ರಾಜ್ಯಗಳಿಂದ ಆಗಮಿಸುವ ಕೇಂದ್ರ ಹಾಗೂ ರಾಜ್ಯ ಪೊಲೀಸ್ ಪಡೆಗಳನ್ನು ಪ್ರತಿನಿಧಿಸುವ ಒಟ್ಟು ಹತ್ತು ತಂಡಗಳು ಈ ಟೂರ್ನಮೆಂಟ್‌ನಲ್ಲಿ ಭಾಗವಹಿಸಲಿವೆ.

ಪಂದ್ಯಗಳು ಗ್ರೌಂಡ್ ನಂ. 2 ಮತ್ತು ಗ್ರೌಂಡ್ ನಂ. 3ರಲ್ಲಿ ಏಕಕಾಲದಲ್ಲಿ ನಡೆಯಲಿದ್ದು, ಟೂರ್ನಮೆಂಟ್‌ನ ಸುವ್ಯವಸ್ಥಿತ ನಿರ್ವಹಣೆ ಹಾಗೂ ಸ್ಪರ್ಧಾತ್ಮಕ ಕ್ರೀಡಾ ಉತ್ಸಾಹವನ್ನು ಖಚಿತಪಡಿಸಲಿದೆ.

ಲೋಗೋ ಮತ್ತು ಟೀಸರ್ ಅನಾವರಣವು ಟೂರ್ನಮೆಂಟ್ ಸಿದ್ಧತೆಗಳಲ್ಲಿ ಒಂದು ಮಹತ್ವದ ಹಂತವಾಗಿದ್ದು, ದೇಶದ ಪೊಲೀಸ್ ಪಡೆಗಳ ನಡುವೆ ಕ್ರೀಡಾಸ್ಫೂರ್ತಿ, ಸಹಭಾವನೆ ಮತ್ತು ಏಕತೆಯ ಮನೋಭಾವವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದರು.

# ನೂತನ ಅಧ್ಯಕ್ಷ ಬಸ್ ಸಂತೋಷ್ ಕುಮಾರ್ ರವರಿಗೆ ಸನ್ಮಾನ



**ಕೃಷ್ಣರಾಜಪೇಟೆ:** ಕರ್ನಾಟಕ ರಾಜ್ಯ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಮಹಾಮಂಡಳಿ ನಿಯಮಿತದ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಬಿಜೆಪಿ ಮುಖಂಡ ಪುರಸಭಾ ಸದಸ್ಯರಾದ ಬಸ್ ಸಂತೋಷ್ ಅವರನ್ನು ಸಮಾಜ ಸೇವಕ ಆರ್.ಟಿ.ಓ. ಮಲ್ಲಿಕಾರ್ಜುನ ಅವರು ಆತ್ಮೀಯವಾಗಿ ಅಭಿನಂದಿಸಿ ಸನ್ಮಾನಿಸಿದರು,

ನಂತರ ಮಾತನಾಡಿದ ಸಮಾಜ ಸೇವಕ ಆರ್.ಟಿ.ಓ. ಮಲ್ಲಿಕಾರ್ಜುನ್ ರವರು ಬಸ್ ಸಂತೋಷ್ ಅವರು ಪಕ್ಷ ಸಂಘಟನೆ ಯಲ್ಲಿ ತೊಡಗಿಸಿ ಕೊಂಡವರು ಹಾಗೆ ಪುರಸಭಾ ಸದಸ್ಯರಾಗಿ ಸಾರ್ವಜನಿಕ ಸೇವೆಯಲ್ಲಿ ಸಕ್ರಿಯರಾಗಿರುವ ಅವರಿಗೆ ರಾಜ್ಯ ಮಟ್ಟದ ಜವಾಬ್ದಾರಿ ಲಭಿಸಿರುವುದು ತಾಲೋಕಿಗೆ ಹೆಮ್ಮೆಯ ವಿಷಯ ಅವರ ನೇತೃತ್ವದಲ್ಲಿ ಕೈಗಾರಿಕಾ ಸಹಕಾರ ಮಹಾ ಮಂಡಳಿಯು ಹೊಸ ಎತ್ತರಕ್ಕೆ ಬೆಳೆಯಲಿ ಎಂದು ಶುಭ ಹಾರೈಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ನೂತನ ಅಧ್ಯಕ್ಷ ಬಸ್ ಸಂತೋಷ್ ಕುಮಾರ್ ರವರು ಬಿಜೆಪಿ ಪಕ್ಷ ಮತ್ತು ಸರ್ಕಾರ ನನ್ನ ಮೇಲೆ ವಿಶ್ವಾಸವಿಟ್ಟು ಈ ಜವಾಬ್ದಾರಿ ನೀಡಿದೆ. ಕೈಗಾರಿಕಾ ಕ್ಷೇತ್ರದಲ್ಲಿ ಸಹಕಾರ ತತ್ವದಡಿ ಪ್ರಗತಿ ಸಾಧಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ, ಪ್ರತಿಯೊಬ್ಬರ ಸಹಕಾರದೊಂದಿಗೆ ಈ ಸಂಸ್ಥೆಯನ್ನು ಬಲಪಡಿಸುವುದೇ ನನ್ನ ಮೊದಲ ಆದ್ಯತೆ ಎಂದು ತಿಳಿಸಿದರು,

ಅ ಭಿ ನಂ ದ ನಾ ಕಾರ್ಯಕ್ರಮದಲ್ಲಿ ಶಿಕ್ಷಣ ನೌಕರರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎ. ಕೆ ದೇವರಾಜು, ಮಂಜಣ್ಣ, ಅನುಗ್ರಹ ಕೇಬಲ್ ಮಾಲಿಕ ನಾಗರಾಜ್, ಶ್ರೀನಿವಾಸ ಬಸ್ ಮಾಲೀಕ ಶಂಕ್ರಣ್ಣ, ಗಜೇಂದ್ರ, ಸಮಾಜ ಸೇವಕ ಆರ್. ಟಿ.ಓ. ಮಲ್ಲಿಕಾರ್ಜುನ್ ಬಳಗದ ಅಧ್ಯಕ್ಷ ಗಂಜಿಗೆರೆ ಮಹೇಶ್ ರವರು ಸೇರಿದಂತೆ ಇನ್ನೂ ಅನೇಕರು ಇದ್ದರು

# ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಬೃಹತ್ ಸೇರ್ಪಡೆ, ಜೆಡಿಎಸ್ ಶಕ್ತಿ ಪ್ರದರ್ಶನ



ಮಂಗಳವಾರ ಬೆಳಿಗ್ಗೆ 11ಗಂಟೆಗೆ ರಾಜ್ಯ ಯುವ ಜೆಡಿಎಸ್ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಜೆಡಿಎಸ್ ಬೆಳ್ಳಿ ಹಬ್ಬದ ಅಂಗವಾಗಿ ಬೃಹತ್ ಜೆಡಿಎಸ್ ಕಾರ್ಯಕರ್ತರ ಸಮಾವೇಶ ಹಾಗೂ 1000ಮಂದಿ ಜೆಡಿಎಸ್ ಪಕ್ಷ ಸೇರ್ಪಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕು ಯುವ ಜೆಡಿಎಸ್ ಅಧ್ಯಕ್ಷ ಮಹಾದೇವೇಗೌಡ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ತಾಲ್ಲೂಕು ಯುವ ಜೆಡಿಎಸ್ ಪದಾಧಿಕಾರಿಗಳ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಮಹಾದೇವೇಗೌಡ ಅವರು ಹರಿಹರಪುರದಿಂದ ಮಡುವಿನಕೋಡಿ ವರೆವಿಗೂ ಯುವ ಜೆಡಿಎಸ್ ವತಿಯಿಂದ ಬೃಹತ್ ಬೈಕ್ ರಾಲಿ ಮೂಲಕ ಬರಮಾಡಿಕೊಳ್ಳಲಾಗುವುದು. ಕ್ಷೇತ್ರದ ಜನಪ್ರಿಯ ಶಾಸಕರಾದ ಹೆಚ್.ಟಿ.ಮಂಜಣ್ಣ ಅವರ ಮಾರ್ಗದರ್ಶನದಲ್ಲಿ ಈ ಬೃಹತ್ ಸಮಾವೇಶ ಹಾಗೂ ಪಕ್ಷ ಸೇರ್ಪಡೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಇದೇ ವೇಳೆ ನಿಖಿಲ್ ಕುಮಾರಸ್ವಾಮಿ ಅವರ 38ನೇ ವರ್ಷದ ಹುಟ್ಟು ಹಬ್ಬದ ಅಂಗವಾಗಿ 38ಕೆ.ಜಿ ಬೃಹತ್ ಗಾತ್ರದ ಕೇಕ್ ಕಟ್ ಮಾಡಲಾಗುವುದು. ನಿಖಿಲ್ ಕುಮಾರಸ್ವಾಮಿ ಮತ್ತು ಹೆಚ್.ಟಿ.ಮಂಜಣ್ಣ ಅವರಿಗೆ ನಿಖಿಲ್ ಕುಮಾರಸ್ವಾಮಿ ಅವರನ್ನು ಬೃಹತ್ ಗಾತ್ರದ ಕೊಬ್ಬರಿ ಕಾಯಿ ಮತ್ತು ಮಂಡ್ಯ ಬೆಲ್ಲದ ಹಾರವನ್ನು ಹಾಕಿ ಸನ್ಮಾನಿಸಿ ಗೌರವಿಸಲಾಗುವುದು ಹಾಗಾಗಿ ನಿಖಿಲ್ ಕುಮಾರಸ್ವಾಮಿ ಆಗಮಿಸುತ್ತಿರುವ ಅಂಗವಾಗಿ ಅವರನ್ನು ಸ್ವಾಗತಿಸಲು ತಾಲ್ಲೂಕಿನ ಗಡಿ ಗ್ರಾಮ ಅಶೋಕ ನಗರ ಬೃಹತ್ ಸಂಖ್ಯೆಯಲ್ಲಿ ಜೆಡಿಎಸ್ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ತಾಲ್ಲೂಕು ಜೆಡಿಎಸ್ ಯುವ ಘಟಕ ಅಧ್ಯಕ್ಷ ಮೀಸೆ ಮಹದೇವೇಗೌಡ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ವಿವೇಕ್, ಅಶೋಕ್, ಅವಿನಾಶ್, ಅಗ್ರಹಾರಬಾಚಹಳ್ಳಿ ಲೋಕೇಶ್,ಸುನಿಲ್,ಕೌಶಿಕ್, ಲೋಕಿ,ರಾಹುಲ್, ಸಿಂಗನಹಳ್ಳಿ ಜೀವನ್, ಕಿಕ್ಕೇರಿ ರಾಕೇಶ್,ಸಂಜಯ್, ಸಚಿನ್ ನಿಖಿಲ್ ಕುಮಾರ ಸ್ವಾಮಿ, ಯಡಹಳ್ಳಿ ಪ್ರಶಾಂತ್, ದಿಲೀಪ್, ಪ್ರವೀಣ್, ಸಚಿನ್, ಸೇರಿದಂತೆ ಇತರರು ಹಾಜರಿದ್ದರು.

# ವಿದ್ಯಾರ್ಥಿಗಳು ಕ್ರೀಡೆ ಮತ್ತು ಪರೀಕ್ಷೆಯ ಫಲಿತಾಂಶದ ಮೂಲಕ ಪ್ರತಿಭೆ ತೋರಿಸಬೇಕು



**ಬೆಂಗಳೂರು:** ಹೆಸರಘಟ್ಟದ ಕಾಳತಮ್ಮನ ಹಳ್ಳಿಯಲ್ಲಿ ಲಕ್ಷ್ಯ ಕೆರಿಯರ್ ಅಕಾಡೆಮಿ, ಸ್ಪಾರ್ಕ್ ಅಕಾಡೆಮಿ ಹಾಗೂ ಸೂರ್ಯ ಫೌಂಡೇಶನ್ ಸಹಯೋಗದಲ್ಲಿ ರಾಜ್ಯಮಟ್ಟದಶೈಕ್ಷಣಿಕ ಸಮ್ಮೇಳನ - 2026 ಭವ್ಯವಾಗಿ ನಡೆಯಿತು. ಶಿಕ್ಷಣ ಕ್ಷೇತ್ರದ ವಿವಿಧ ಆಯಾಮಗಳ ಕುರಿತು ಚರ್ಚೆ, ಮಾರ್ಗದರ್ಶನ ಹಾಗೂ ಪ್ರೇರಣಾತ್ಮಕ ಸಂದೇಶಗಳಿಗೆ ಸಮ್ಮೇಳನ ಸಾಕ್ಷಿಯಾಯಿತು.

ಸಮ್ಮೇಳನದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮೈಂಡ್ ಕೋಚ್ ಹಾಗೂ ಅಂತರರಾಷ್ಟ್ರೀಯ ತರಬೇತುದಾರರಾದ ಸಿ.ಬಿ. ವೇಣು ಮಾತನಾಡಿ, ಇಂದಿನ ವಿದ್ಯಾರ್ಥಿಗಳು ಭವಿಷ್ಯಕ್ಕೆ ಸಜ್ಜಾಗಲು ಈಗಿನಿಂದಲೇ ಶಿಸ್ತು, ಸಂಯಮ, ಸಂಸ್ಕಾರ ಮತ್ತು ಸಂಸ್ಕೃತಿಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪಾಠ್ಯಾಭ್ಯಾಸದ ಜೊತೆಗೆ ಪರೀಕ್ಷೆಗಳು ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ತಮ್ಮ ಅಡಗಿರುವ ಪ್ರತಿಭೆಯನ್ನು ಹೊರತರುವ ಮೂಲಕ ಸಮಗ್ರ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಈ ಸಂದರ್ಭ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಪ್ರತಿಷ್ಠಿತ ಹದಿನೈದು ಶಾಲೆಗಳ ಸಂಸ್ಥಾಪಕರಿಗೆ 'ಶಿಕ್ಷಣ ಚೈತನ್ಯ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಜೊತೆಗೆ ಶಿಕ್ಷಣ ಕ್ಷೇತ್ರದಲ್ಲಿ ನಿರಂತರ ಸೇವೆ ಸಲ್ಲಿಸುತ್ತಿರುವ ವಿವಿಧ ಶಾಲೆಗಳ ಶಿಕ್ಷಕರನ್ನು ಅಭಿನಂದಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಲಕ್ಷ್ಯ ಕೆರಿಯರ್ ಅಕಾಡೆಮಿ ಅಧ್ಯಕ್ಷ ಧರ್ಮ, ಸಂಸ್ಥಾಪಕರಾದ ಧರ್ಮರಾಜ್ ಮತ್ತು ಶ್ರೀಧರ್, ಗಂಗೋತ್ರಿ ಎಜುಕೇಶನಲ್ ಟ್ರಸ್ಟ್ ಅಧ್ಯಕ್ಷ ಸಿದ್ದಗಂಗಯ್ಯ, ತರಬೇತುದಾರ ಬಿ.ಕೆ. ಸತೀಶ್, ಪತ್ರಕರ್ತ ಗಂಡಸಿ ಸದಾನಂದ ಸ್ವಾಮಿ, ನವೋದಯ ಸೋಮೇಶ್, ಶ್ರೀನಿವಾಸ್, ಟಿ.ಎಸ್. ಗಂಗರಾಜು ಸೇರಿದಂತೆ ಹಲವು ಶಿಕ್ಷಣ ತಜ್ಞರು, ಗಣ್ಯರು ಉಪಸ್ಥಿತರಿದ್ದರು.

ಸಮ್ಮೇಳನವು ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಶಿಕ್ಷಣ ಸಂಸ್ಥೆಗಳ ನಡುವೆ ಸಂವಾದಕ್ಕೆ ವೇದಿಕೆಯಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಹೊಸ ಚಿಂತನೆಗಳಿಗೆ ದಿಕ್ಕು ನೀಡಿದ ಮಹತ್ವದ ಕಾರ್ಯಕ್ರಮವಾಗಿ ಮೂಡಿಬಂತು.

# ಹಗಲಲ್ಲಿ ಕಬ್ಬು ಕಟಾವು, ರಾತ್ರಿ ವೇಳೆ ಮನೆ ಕಳ್ಳತನ



**ಬಾಗಲಕೋಟೆ:** ಕಬ್ಬು ಕಟಾವು ಮಾಡುವ ನೆಪದಲ್ಲಿ ಬಾಗಲಕೋಟೆ ಜಿಲ್ಲೆಗೆ ಕಾಲಿಟ್ಟಿದ್ದ ಮಹಾರಾಷ್ಟ್ರ ಮೂಲದ ಸಂಘಟಿತ ಕಳ್ಳರ ಗ್ಯಾಂಗ್‌ನ್ನು ಬಾಗಲಕೋಟೆ ಪೊಲೀಸರು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ. ದಿನದ ಹೊತ್ತಿನಲ್ಲಿ ಹೊಲಗಳಲ್ಲಿ ಕಬ್ಬು ಕಟಾವು ಕೆಲಸ ಮಾಡುತ್ತಿದ್ದಂತೆ ನಟಿಸಿ, ರಾತ್ರಿ ವೇಳೆ ಮನೆಗಳಿಗೆ ನುಗ್ಗಿ ಕಳ್ಳತನ ನಡೆಸುತ್ತಿದ್ದ ಈ ಖತರ್ನಾಕ್ ತಂಡವನ್ನು ಗುಳೇದಗುಡ್ಡ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಗಳನ್ನು ಶಂಕರ್ ಪವಾರ್ (20), ಅಭಿ ಬೋಸ್ಲೆ (19), ಲಕ್ಷ್ಮೀ ಬೋಸ್ಲೆ (40), ಕರಣ ಪವಾರ್ (20) ಹಾಗೂ ಮಮತಾ ಬೋಸ್ಲೆ (21) ಎಂದು ಗುರುತಿಸಲಾಗಿದ್ದು, ಇವರೆಲ್ಲರೂ ಮಹಾರಾಷ್ಟ್ರದ ಪರಭಾನಿ ಜಿಲ್ಲೆಯ ಮಂಗರೂಲ ತಾಂಡಾ ಗ್ರಾಮದ ನಿವಾಸಿಗಳಾಗಿದ್ದಾರೆ ಎಂಬುದು ತನಿಖೆಯಲ್ಲಿ ತಿಳಿದು ಬಂದಿದೆ.

ಪೊಲೀಸರ ಮಾಹಿತಿ ಪ್ರಕಾರ, ಈ ಗ್ಯಾಂಗ್ ಬಾಗಲಕೋಟೆ ಜಿಲ್ಲೆಗೆ ಕಬ್ಬು ಕಟಾವು ಕಾರ್ಮಿಕರಾಗಿ ಬಂದಿತ್ತು. ಹಗಲು ಹೊತ್ತಿನಲ್ಲಿ ಹೊಲಗಳಲ್ಲಿ ಕೆಲಸ ಮಾಡುತ್ತಿದ್ದ ಈ ತಂಡ, ರಾತ್ರಿ ಸಮಯದಲ್ಲಿ ಮನೆ ಕಳ್ಳತನಕ್ಕೆ ಇಳಿಯುತ್ತಿತ್ತು. ಕಳ್ಳತನ ಮಾಡುವ ವೇಳೆ ಜಾಕೆಟ್ ಮತ್ತು ಮಾಸ್ಕ್ ಧರಿಸಿ, ಕೈಯಲ್ಲಿ ಬ್ಯಾಟರಿ ಹಾಗೂ ರಾಡ್ ಹಿಡಿದು ಮನೆಗಳಿಗೆ ನುಗ್ಗಿ ಚಿನ್ನಾಭರಣ ಹಾಗೂ ಮೌಲ್ಯದ ವಸ್ತುಗಳನ್ನು ಕಳವು ಮಾಡುತ್ತಿದ್ದರು. ಆರೋಪಿಗಳು ಕಳ್ಳತನ ನಡೆಸುತ್ತಿರುವ ದೃಶ್ಯಗಳು ಸಿಸಿ ಕ್ಯಾಮೆರಾಗಳಲ್ಲಿ ಸೆರೆಯಾಗಿದ್ದು, ಅದೇ ಸುಳಿವಿನ ಆಧಾರದಲ್ಲಿ ಪೊಲೀಸರು ಗ್ಯಾಂಗ್‌ನ ಚಟುವಟಿಕೆ ಗಳನ್ನೇ ಪತ್ತೆಹಚ್ಚಿದರು.

ಈ ಗ್ಯಾಂಗ್ ಬಾಗಲಕೋಟೆ ಜಿಲ್ಲೆಯ ಗುಳೇದಗುಡ್ಡ, ಬಾದಾಮಿ ಹಾಗೂ ಗದಗ ಜಿಲ್ಲೆ ಸೇರಿ ಒಟ್ಟು ಆರು ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದುದಾಗಿ ತನಿಖೆಯಲ್ಲಿ ಬಯಲಾಗಿದೆ. ಗುಳೇದಗುಡ್ಡ ಪಟ್ಟಣ, ಗುಳೇದಗುಡ್ಡ ತಾಲೂಕಿನ ಬೂದಿನಗಡ ಹಾಗೂ ಹಂಸನೂರು, ಬಾದಾಮಿ ತಾಲೂಕಿನ ಮುಮರೆಡ್ಡಿಕೊಪ್ಪ ಮತ್ತು ಮುತ್ತಲಗೇರಿ ಗ್ರಾಮಗಳಲ್ಲಿ ಕಳ್ಳತನ ನಡೆಸಿದ್ದರು. ಅಲ್ಲದೆ ಗದಗ ಜಿಲ್ಲೆಯ ರೋಣ ತಾಲೂಕಿನ ಹೊಳೆಹಡಗಲಿ ಗ್ರಾಮದಲ್ಲಿಯೂ ಮನೆ ಕಳ್ಳತನಕ್ಕೆ ಯತ್ನಿಸಿದ್ದು, ಆ ಘಟನೆಯ ದೃಶ್ಯಗಳು ಕೂಡ ಸಿಸಿ ಕ್ಯಾಮೆರಾದಲ್ಲಿ ದಾಖಲಾಗಿವೆ.

ಕಳ್ಳತನಕ್ಕೆ ಮುನ್ನ ಈ ತಂಡ ಪಕ್ಕಾ ಪ್ಲ್ಯಾನ್ ಮಾಡುತ್ತಿದ್ದುದಾಗಿ ಪೊಲೀಸರು ತಿಳಿಸಿದ್ದಾರೆ. ಕಬ್ಬು ಕಟಾವು ನಡೆಯುವ ಪ್ರದೇಶದ ಸುತ್ತಮುತ್ತಲಿನ ಊರುಗಳಲ್ಲಿ ಹಗಲು ವೇಳೆಯಲ್ಲಿ ತಿರುಗಾಡಿ ಯಾವ ಮನೆಗಳಲ್ಲಿ ಜನರಿಲ್ಲ, ಯಾವ ಮನೆ ಕಳ್ಳತನಕ್ಕೆ ಸೂಕ್ತ ಎಂಬುದನ್ನು ಗಮನಿಸಿ ಸಂಪೂರ್ಣ ಸ್ಕೆಚ್ ತಯಾರಿಸುತ್ತಿದ್ದರು. ರಾತ್ರಿ ಸಮಯದಲ್ಲಿ ಪುರುಷರು ಮನೆಗಳಿಗೆ ನುಗ್ಗಿ ಚಿನ್ನಾಭರಣ ಕಳವು ಮಾಡುತ್ತಿದ್ದರೆ, ಮಹಿಳೆಯರು ಆ ಚಿನ್ನಾಭರಣವನ್ನು ಮಾರಾಟ ಮಾಡಿ ಹಣ ತರಲು ಮುಂದಾಗುತ್ತಿದ್ದರು ಎನ್ನಲಾಗಿದೆ.

ಬಂಧಿತ ಆರೋಪಿಗಳಿಂದ ಒಟ್ಟು 25 ಗ್ರಾಂ ಚಿನ್ನಾಭರಣ, ಸುಮಾರು ₹6 ಲಕ್ಷ 8 ಸಾವಿರ ಮೌಲ್ಯದ ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಈ ಮೂಲಕ ಜಿಲ್ಲೆಯಲ್ಲಿ ಮನೆ ಕಳ್ಳತನಕ್ಕೆ ಆತಂಕ ಹುಟ್ಟಿಸಿದ್ದ ಖತರ್ನಾಕ್ ಗ್ಯಾಂಗ್‌ನ ಹೆಡೆಮುರಿ ಕಟ್ಟುವಲ್ಲಿ ಗುಳೇದಗುಡ್ಡ ಪೊಲೀಸರು ಮಹತ್ವದ ಯಶಸ್ಸು ಸಾಧಿಸಿದ್ದಾರೆ.



ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ 9538786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಸ್ನೇಹಿತರಿಂದಲೇ ರೌಡಿಶೀಟರ್‌ನ ಡೆಡ್ಲಿ ಮರ್ಡರ್

**ನೆಲಮಂಗಲ:** ಮಾರಕಾಸ್ತ್ರಗಳಿಂದ ಇರಿದು ಸ್ನೇಹಿತರೇ ರೌಡಿಶೀಟರ್ ನೋರ್ವನನ್ನು ಭೀಕರವಾಗಿ ಹತ್ಯೆ ಮಾಡಿರುವ ಘಟನೆ ನೆಲಮಂಗಲ ಬಳಿಯ ಬಾಲಾಜಿ ಫಾರ್ಮ್ ಹೌಸ್‌ನಲ್ಲಿ ನಡೆದಿದೆ. ಲಗ್ಗೆರೆ ಮತ್ತು ಹುಲಿಯೂರುದುರ್ಗ ಠಾಣಾ ವ್ಯಾಪ್ತಿಯ ರೌಡಿಶೀಟರ್ ಆಟೋ ನಾಗ ಕೊಲೆಯಾದ ವ್ಯಕ್ತಿಯಾಗಿದ್ದು, ಸ್ಥಳಕ್ಕೆ ಮಾದನಾಯಕನಹಳ್ಳಿ ಪೊಲೀಸರ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಹಣದ ವಿಚಾರಕ್ಕೆ ಮರ್ಡರ್ ನಡೆದಿದೆ ಎನ್ನಲಾಗಿದೆ.


**ಮೊದಲು ಪಾರ್ಟಿ, ಆಮೇಲೆ ಮರ್ಡರ್!:** ಗಂಗೊಂಡಹಳ್ಳಿಯಲ್ಲಿದ್ದ ನಾಗ ಇಂದು ಸ್ನೇಹಿತರೊಂದಿಗೆ ಪಾರ್ಟಿ ಮಾಡಲು ಮುಂದಾಗಿದ್ದ. ಹೀಗಾಗಿ ಮಧ್ಯಾಹ್ನ 2.30ರ ವೇಳೆಗೆ ಬಾಲಾಜಿ ಫಾರ್ಮ್ ಹೌಸ್‌ಗೆ ಬಂದಿದ್ದ. ಸ್ನೇಹಿತರ ಜೊತೆಗೆ ಕೂತು ಚೆನ್ನಾಗಿ ಮದ್ಯವನ್ನೂ ಸೇವಿಸಿದ್ದ. ಎಲ್ಲರೂ ಒಟ್ಟಾಗಿ ಒಂದೇ ತಟ್ಟೆಯಲ್ಲಿ ಊಟವನ್ನೂ ಮಾಡಿದ್ದರು. ಆದರೆ ಬಳಿಕ ನಡೆಯಬಾರದ್ದು ನಡೆದಿದೆ. ನಾಗ ಕುಡಿದ ಮತ್ತಲ್ಲಿ ಇರುವಾಗ ಸ್ನೇಹಿತರೇ ಆತನನ್ನು ಡ್ರ್ಯಾಗರ್‌ನಿಂದ ಇರಿದು ಕೊಂದಿದ್ದಾರೆ. ಘಟನೆ ಸಂಬಂಧ ಎಸಿಪಿ



ಅಶೋಕ್ ಹಾಗೂ ಇನ್ಸ್‌ಪೆಕ್ಟರ್ ಮುರುಳಿಧರ್ ಸ್ಥಳಕ್ಕೆ ಭೇಟಿ ನೀಡಿದ್ದು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ.

**ಹಣದ ವಿಚಾರಕ್ಕೆ ಹರಿದ ನೆತ್ತರು:** ಸ್ನೇಹಿತ ಅಭಿ ಎಂಬಾನಿಗೆ ಅಂದರ್ ಬಾಹರ್ ಹಣದಲ್ಲಿ ನಾಗ 22 ಲಕ್ಷ ಸಾಲ ನೀಡಿದ್ದ. ಆದ್ರೆ ಕೊಟ್ಟ ಹಣ ಹಿಂದಿರುಗಿಸುವಂತೆ ನಾಗ ಇತ್ತೀಚೆಗೆ ಕೇಳಿದ್ದು, ಹಣ ವಾಪಸ್ ಕೊಡಲು ಸಾಧ್ಯವಾಗದ ಕಾರಣ ಕೊಲೆಗೆ ಸ್ಕೆಚ್ ರೆಡಿಯಾಗಿತ್ತು. ಇಂದು ಪಾರ್ಟಿ ಮಾಡಿ ಮಾತನಾಡುವ ನೆಪದಲ್ಲಿ ನಾಗನನ್ನು ಕರೆಸಿಕೊಂಡಿದ್ದ ಆರೋಪಿಗಳು ಮರ್ಡರ್ ಮಾಡಲು ಸಿದ್ಧವಾಗಿಯೇ ಬಂದಿದ್ದರು. ನಾಗ ಹಾಗೂ ಆರೋಪಿಗಳು ಸೇರಿ ಎರಡು ರೂಂಗಳನ್ನು ಬುಕ್ ಮಾಡಿದ್ದರು. ನಾಗ ಬಂದ ಬಳಿಕ ಚೆನ್ನಾಗಿ ಪಾರ್ಟಿ ಮಾಡಿದ್ದು, ಬಳಿಕ ಪ್ಲ್ಯಾನ್‌ನಂತೆ ಆತನನ್ನು ಇರಿದು ಕೊಲ್ಲಲಾಗಿದೆ. ತಲೆ ಮರೆಸಿಕೊಂಡಿರುವ ಆರೋಪಿಗಳಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದು, ತನಿಖೆ ಮುಂದುವರಿದಿದೆ.

# ಚಿರತೆ ದಾಳಿ, ಹಸು ಸಾವು : ಪರಿಹಾರಕ್ಕೆ ರೈತ ಒತ್ತಾಯ



**ಯಶವಂತಪುರ:** ತಾವರೆಕೆರೆ ಹೋಬಳಿಯ ದೇವ ಮಾಚೋಹಳ್ಳಿಯ ಮುತ್ತುರಾಯಸ್ವಾಮಿ ದೇವಸ್ಥಾನ ಸಮೀಪ ಚಿರತೆ ದಾಳಿಯಿಂದ ಹಸು ಸಾವನ್ನಪ್ಪಿದ್ದು ಗ್ರಾಮಸ್ಥರು ಭಯಭೀತರಾಗಿದ್ದಾರೆ. ಬೇಸಿಗೆ ಕಾಲವಾದ್ದರಿಂದ ದೇವಮಾಚೋಹಳ್ಳಿಯ ರೈತ ರಂಗಸ್ವಾಮಿ ಅವರು ಭಾನುವಾರ ಗ್ರಾಮದ ಸಮೀಪ ಹಸುವನ್ನು ಮೇಯಲು ಬಿಟ್ಟಿದ್ದು ಮನೆಗೆ ಬಂದಿರಲಿಲ್ಲ. ಚಿರತೆ ದಾಳಿಯಿಂದ ಹಸು ಸಾವನ್ನಪ್ಪಿರುವ ಸಂಗತಿ ಸೋಮವಾರ ಬೆಳಿಗ್ಗೆ ಬೆಳಕಿಗೆ ಬಂದಿದೆ. ಹೊಟ್ಟೆ ಭಾಗಕ್ಕೆ ಚಿರತೆ ಕಚ್ಚಿರುವ ಪರಿಣಾಮ ತೀವ್ರ ರಕ್ತಶ್ರಾವದಿಂದ ಗರ್ಭಿಣಿ ಹಸು ಸ್ಥಳದಲ್ಲೇ ಅಸುನೀಗಿದ್ದು ಕಗ್ಗಲಿಪುರ ವಲಯ ಅರಣ್ಯ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು.

ಈ ವೇಳೆ ಮಾತನಾಡಿದ ಹಸು ಮಾಲೀಕ ರೈತ ರಂಗಸ್ವಾಮಿ ಚಿರತೆ ದಾಳಿಯಿಂದ ಸುಮಾರು 70 ಸಾವಿರ ಬೆಲೆಬಾಳುವಹಸು ಸಾವನಪ್ಪಿದ್ದು ಸರ್ಕಾರ ಕೂಡಲೇ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು. ಭಕ್ಷಕ ಚಿರತೆಯಿಂದಯಾವುದೇ ಅನಾಹುತ ಸಂಭವಿಸದಂತೆ ಚಿರತೆ ಸೆರೆಗೆ ಕೂಡಲೇಬೋನು ಇರಿಸಬೇಕೆಂದು ಗ್ರಾಮಸ್ಥರು ಇದೇ ವೇಳೆ ಒತ್ತಾಯಿಸಿದರು.

# ಹುತಾತ್ಮರ ಕನಸು ನನಸು ಮಾಡುವ ಕನಸು ನಿಮ್ಮದಾಗಲಿ: ಕೆವಿಪಿ ಕರೆ

**ಮಂಗಳೂರು:** ಗಣರಾಜ್ಯಗಳ ಅಧಿಪತಿ ಭಾರತ ಎಂದು ನಾವು ಹೆಮ್ಮೆ ಪಡುವಾಗ ನಮಗೆ ಒಕ್ಕೂಟ ವ್ಯವಸ್ಥೆಯ ಬಗ್ಗೆಯೂ ಹೆಮ್ಮೆ ಇರಬೇಕು.

ಹುತಾತ್ಮರ ಕನಸು ನನಸು ಮಾಡುವ ಕನಸು ನಿಮ್ಮದಾದಾಗ ಮಾತ್ರ ಹುತಾತ್ಮರಿಗೆ ಗೌರವ ಕೊಟ್ಟಂತಾಗುತ್ತದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್ ಅಭಿಪ್ರಾಯಪಟ್ಟರು.

ಮಂಗಳೂರು ವಿಶ್ವ ವಿದ್ಯಾಲಯ ಆಯೋಜಿಸಿದ್ದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಇಲ್ಲಿ ಕುಳಿತಿರುವ ವಿದ್ಯಾರ್ಥಿಗಳು ಈ ದೇಶದ ನಾಳೆಯ Architect ಗಳು ಮಾತ್ರವಲ್ಲ. ನಿಮ್ಮ ಬದುಕು ಮತ್ತು ಭವಿಷ್ಯದ Architect ಗಳೂ ಹೌದು. ನಿಮ್ಮ ಭವಿಷ್ಯದ ವಾಸ್ತುಶಿಲ್ಪಿಗಳಾಗುವುದು ಮತ್ತು ದೇಶದ ಭವಿಷ್ಯದ ವಾಸ್ತು ಶಿಲ್ಪಿಗಳಾಗುವುದು ಎರಡೂ ಬೇರೆ ಬೇರೆ ಸಂಗತಿಗಳಲ್ಲ. ಇವರೆಡರ ನಡುವೆ ಪರಸ್ಪರತೆ ಇದೆ ಎಂದರು.

ಕಾಲೇಜು ವಿದ್ಯಾರ್ಥಿಗಳು ಜನವರಿ 26 ಅಂದರೆ, ಒಂದು ಸರ್ಕಾರಿ ರಜಾ ದಿನ ಅಂತ ಮಾತ್ರ ಖುಷಿ ಪಡಬಾರದು. ಅದರಲ್ಲೂ ಈ ಬಾರಿಯ ಗಣರಾಜ್ಯೋತ್ಸವವನ್ನು "Long week end" ಎಂದು ಸಂಭ್ರಮ ಪಡುತ್ತಿರುವವರ ಸಂಖ್ಯೆಯೇ ಹೆಚ್ಚಾಗಿದೆ ಎಂದರು.

ಈ ತ್ರಿವರ್ಣ ಧ್ವಜವನ್ನು ನೋಡಿದಾಗ ನಮಗೆ ಥ್ರಿಲ್ ಆಗತ್ತೆ. ರೋಮಾಂಚನ ಆಗತ್ತೆ. ಈ ರೋಮಾಂಚನದ ಹಿಂದೆ ನಮ್ಮ ಹಿರಿಯರ ಹೋರಾಟ, ತ್ಯಾಗ, ಬಲಿದಾನದ ಸುದೀರ್ಘ ಚರಿತ್ರೆಯೇ ಇದೆ. ಇವರೆಲ್ಲರ ಬಲಿದಾನದ ಹಿಂದೆ ಒಂದು ಕನಸಿತ್ತು.



**ಗಣರಾಜ್ಯಗಳ ಅಧಿಪತಿ ಭಾರತ ಎಂದು ನಾವು ಹೆಮ್ಮೆ ಪಡುವಾಗ ನಮಗೆ ಒಕ್ಕೂಟ ವ್ಯವಸ್ಥೆಯ ಬಗ್ಗೆಯೂ ಹೆಮ್ಮೆ ಇರಬೇಕು: ಕೆ.ವಿ.ಪ್ರಭಾಕರ್**

ಸ್ವತಂತ್ರ ಮತ್ತು ಸದೃಡ ಹಾಗೂ ಸರ್ವಧರ್ಮ ಸಮನ್ವಯದ ಭಾರತವನ್ನು ಕಟ್ಟಿ ನಿಲ್ಲಿಸುವ ಗಟ್ಟಿ ಕನಸಿತ್ತು. ನಮ್ಮ ಹಿರಿಯರು ಈ ಕನಸನ್ನು ಸ್ವತಂತ್ರ ಭಾರತದ ಯುವಕ/ಯುವತಿಯರ ಅಂಗೈಗಳಿಗೆ ಕೊಟ್ಟು ಅವರು ಹುತಾತ್ಮರಾಗಿದ್ದಾರೆ.

ಈ ಕನಸನ್ನು ನನಸು ಮಾಡಬೇಕಾದವರು "long week end"ಗಳಲ್ಲಿ ಕಳೆದು ಹೋಗುವುದು ಬೇಸರದ ಸಂಗತಿ ತಾನೇ ? ಎಂದು ಪ್ರಶ್ನಿಸಿದ ಅವರು ಹುತಾತ್ಮರ ಕನಸನ್ನು ನನಸು ಮಾಡುವಭಾರತಕ್ಕೆ ಕನಸು ನಮ್ಮದಾಗಲಿ ಎಂದು ಕರೆ ನೀಡಿದರು.

1950 ಜನವರಿ 26 ಸ್ವತಂತ್ರ ಭಾರತ ಗಣರಾಜ್ಯವಾಗಿ ಪುನರ್ ಪ್ರತಿಷ್ಠಾಪನೆಯಾದ ದಿನ. ಗಣಗಳ ಅಧಿಪತಿಯನ್ನು ಗಣಪತಿ ಎಂದು ಕರೆಯುತ್ತೇವೆ. ಹಾಗೆಯೇ ಗಣರಾಜ್ಯಗಳ ಅಧಿಪತಿ ಭಾರತ.

ಸ್ವತಂತ್ರ ಭಾರತಕ್ಕೆ ಗಟ್ಟಿ ಸಂವಿಧಾನದ ಮುದ್ರೆ ಬಿದ್ದು Rule of Law ಅಂದರೆ ಕಾನೂನೀ ಆಡಳಿತ ಜಾರಿಯಾದ ದಿನ ಕೂಡ ಹೌದು.

ನಮ್ಮ ಸಂವಿಧಾನ ಕೇವಲ ಕಾನೂನು ಪಠ್ಯವಲ್ಲ; ಇದು ಪ್ರತಿಯೊಬ್ಬ ಭಾರತೀಯನ ಪ್ರಥಮ User Manual ಅಂದರೆ "ಕೈಪಿಡಿ" ಆಗಿದೆ ಎಂದು ವಿವರಿಸಿದರು.

ಸಂವಿಧಾನ ನಮಗೆ ಮಾತನಾಡುವ, ಭಿನ್ನಾಭಿಪ್ರಾಯ ವ್ಯಕ್ತಪಡಿಸುವ, ಕನಸು ಕಾಣುವ ಮತ್ತು ನಾವು ಯಾರೆಂದು ನಿಖರವಾಗಿ ಹೇಳುವ ಹಕ್ಕನ್ನು ನೀಡುತ್ತದೆ.

ಕಾಲೇಜು ವಿದ್ಯಾರ್ಥಿಗಳಾದ ನೀವು ನಿಮ್ಮ ಜೀವನದ ಅತ್ಯಂತ ಶಕ್ತಿಶಾಲಿ ಮತ್ತು ನಿರ್ಣಾಯಕ ಹಂತದಲ್ಲಿದ್ದೀರಿ. ಹಳತಾದ ವ್ಯವಸ್ಥೆಗಳನ್ನು ಪ್ರಶ್ನಿಸುವ ಕುತೂಹಲದ ಜೊತೆಗೆ, ಬದಲಾವಣೆಯನ್ನು ಒತ್ತಾಯಿಸುವ ಮತ್ತು ರೂಪಿಸುವ ಶಕ್ತಿ ನಿಮಗಿದೆ.

ಸೆಕೆಂಡುಗಳಲ್ಲಿ ಪ್ರಪಂಚದಾದ್ಯಂತ ನಿಮ್ಮ ಧ್ವನಿಯನ್ನು ಹರಡುವ ತಂತ್ರಜ್ಞಾನ ನಿಮ್ಮ ಅಂಗೈಯಲ್ಲಿದೆ.

ಗಣರಾಜ್ಯವು ನಮ್ಮ ನಾಗರಿಕರ ಪಾಲ್ಗೊಳ್ಳುವಿಕೆಯಿಂದಷ್ಟೇ ಪ್ರಬಲವಾಗುತ್ತದೆ ಎನ್ನುವುದನ್ನು ಅರಿತು ಕಾರ್ಯೋನ್ಮುಖರಾಗಿ ಎಂದು ಕರೆ ನೀಡಿದರು.

ಪ್ರಜಾಪ್ರಭುತ್ವ ಅಂದರೆ ನಾವು ಪ್ರೇಕ್ಷಕರಾಗಿ ನೋಡುತ್ತಾ ಕೂರುವ ಕ್ರೀಡೆಯಲ್ಲ. ನಾವು, ನೀವು ಇಲ್ಲಿ ಕುಳಿತಿರುವ ಪ್ರತಿಯೊಬ್ಬರೂ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸುವ ಸಾಧನಗಳು, ಅಸ್ತ್ರಗಳಾಗಬೇಕು. ನಮ್ಮ ಪೂರ್ವಜರು ಸ್ವಾತಂತ್ರ್ಯಕ್ಕಾಗಿ ಹೋರಾಡಿದರು, ಆದರೆ ನಾವು ಸ್ವಾತಂತ್ರ್ಯದ ಮೌಲ್ಯ ಮತ್ತು ಇದರ ಶ್ರೇಷ್ಠತೆ ಕಾಪಾಡಲು ಹೋರಾಡಬೇಕು ಎಂದರು.

ಸಂವಿಧಾನದ ಕತೃ ಡಾ.ಬಿ.ಆರ್.ಅಂಬೇಡ್ಕರ್ ಅವರು, "ಸಂವಿಧಾನವು ಕೇವಲ ವಕೀಲರ ದಾಖಲೆಯಲ್ಲ, ಅದು ಜೀವನದ ವಾಹಕ, ಮತ್ತು ಅದರ ಚೈತನ್ಯವು ಯಾವಾಗಲೂ ಯುಗದ ಚೈತನ್ಯವಾಗಿದೆ." ಎಂದು ಹೇಳಿರುವುದು ಈ ಉದ್ದೇಶಕ್ಕೇ.ನೀವು ಈ ಕ್ಯಾಂಪಸ್‌ನಿಂದ ಹೊರಡುವಾಗ, ಡಿಗ್ರಿ ಪಡೆದ ಹೆಮ್ಮೆಯನ್ನು ಮಾತ್ರ ಹೊತ್ತುಕೊಂಡು ಹೋಗಬೇಡಿ. ಸ್ವತಂತ್ರ ಭಾರತದ ಹುತಾತ್ಮರ ಕನಸುಗಳನ್ನು ನನಸು ಮಾಡುವ ಸೇನಾನಿಗಳಾಗಿ ಹೊರಡಿ. ಉದ್ಯೋಗಗಳನ್ನು ಸೃಷ್ಟಿಸುವ ಉದ್ಯಮಿಯಾಗಿ, ಔಷಧಿಗಳನ್ನು ಕಂಡುಕೊಳ್ಳುವ ವಿಜ್ಞಾನಿಯಾಗಿ, ಸತ್ಯವನ್ನು ಮಾತನಾಡುವ ಕಲಾವಿದನಾಗಿ ಮತ್ತು ಪ್ರತಿಯೊಬ್ಬ ಭಾರತೀಯನನ್ನು ಘನತೆಯಿಂದ ನಡೆಸಿಕೊಳ್ಳುವ ನಾಗರಿಕನಾಗಿ ಕ್ಯಾಂಪಸ್ಸಿನ ಒಳಗೆ ಮತ್ತು ಹೊರಗೆ ಅತ್ಯುನ್ನತ ನಾಗರಿಕತೆಯನ್ನು ಆಚರಿಸುವ ಸೇನಾನಿಯಾಗಿ ಎಂದು ನಾನು ಹಾರೈಸುತ್ತೇನೆ ಎಂದರು.

ಭಾರತ ಗಣರಾಜ್ಯವಾಗಿ ಸ್ಥಾಪನೆಯಾಗುವ 1950 ರಲ್ಲಿ ಸಾಕ್ಷರತೆ ದೇಶದ ದೊಡ್ಡ ಸವಾಲಾಗಿತ್ತು. 2026 ರಲ್ಲಿ, ಸತ್ಯದ ಸಾಕ್ಷರತೆ ಸವಾಲಾಗಿದೆ.

ಡೀಪ್‌ಫೇಕ್‌ಗಳ

ಕಾಲದಲ್ಲಿ ಸತ್ಯದ ಸೇನಾನಿಗಳಾಗಬೇಕಿದೆ. ನಾವು ಸವಕಲು ಯುವ ಸಮೂಹದಿಂದ ಸಮೃದ್ಧ ಗಣರಾಜ್ಯವನ್ನು ಹೊಂದಲು ಸಾಧ್ಯವಿಲ್ಲ.

"ಒಂದು ರಾಷ್ಟ್ರದ ಪ್ರಗತಿಯನ್ನು ಅದರ GDP ಯಿಂದ ಮಾತ್ರ ಅಳೆಯಲಾಗುವುದಿಲ್ಲ, ಬದಲಿಗೆ ಅದು ಅದರ ನಾಗರಿಕನನ್ನು ಘನತೆಯಿಂದ ನಡೆಸಿಕೊಳ್ಳುವ ಮತ್ತು ಮತ್ತು ಪ್ರತಿಯೊಬ್ಬ ಪ್ರಜೆಯೂ ಎಷ್ಟು civilize ಆಗಿದ್ದಾನೆ, ಎಷ್ಟು ನಾಗರಿಕನಾಗಿದ್ದಾನೆ ಎನ್ನವುದರ ಮೇಲೂ ಅಳೆಯಲಾಗುತ್ತದೆ ಎಂದು ವಿವರಿಸಿದರು.

***ಆದ್ದರಿಂದ ವಿದ್ಯಾರ್ಥಿಗಳು ಈ ಗಣರಾಜ್ಯ ದಿನದ ಮೂಲ ತತ್ವಗಳಾದ ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವವನ್ನು ಅರ್ಥಮಾಡಿಕೊಳ್ಳುವುದಷ್ಟೆ ಅಲ್ಲ ಆಚರಿಸಬೇಕು.**

***ಭಾಷೆ, ಧರ್ಮ, ಜಾತಿಗಳ ಭೇದವಿಲ್ಲದೆ ಎಲ್ಲರನ್ನೂ ಗೌರವಿಸುವ ಮೂಲಕ ದೇಶದ ಏಕತೆಯನ್ನು ಎತ್ತಿ ಹಿಡಿಯಬೇಕು.**

***ವಿಶ್ವವಿದ್ಯಾಲಯಗಳು ಕೇವಲ ಪದವಿ ನೀಡುವ ಕೇಂದ್ರಗಳಾಗದೆ, ವಿದ್ಯಾರ್ಥಿಗಳಲ್ಲಿ ನಾಗರಿಕ ಪ್ರಜ್ಞೆಯನ್ನು ಬೆಳೆಸುವ ಕಾರ್ಯಾಗಾರಗಳಾಗಬೇಕು ಎಂದು ಎಂದು ಆಶಿಸುತ್ತಾ, ಹಾರೈಸುತ್ತಾ ಮಾತು ಮುಗಿಸುತ್ತೇನೆ.**

# ಬೆಂ.ಗ್ರಾ ಜಿಲ್ಲೆಯಲ್ಲಿ 77ನೇ ಗಣರಾಜ್ಯೋತ್ಸವ ದಿನಾಚರಣೆ



**ಬೆಂ.ಗ್ರಾ.ಜಿಲ್ಲೆ:,** ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತ ಆಶ್ರಯದಲ್ಲಿ ದೇವನಹಳ್ಳಿ ಟೌನ್ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವ ಜಿಲ್ಲಾ ಮಟ್ಟದ ಕಾರ್ಯಕ್ರಮ ಭವ್ಯವಾಗಿ ನಡೆಯಿತು. ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ ತ್ರಿವರ್ಣ ಧ್ವಜಕ್ಕೆ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ವಂದನೆ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ರಾಷ್ಟ್ರ ಪ್ರಶಸ್ತಿ ವಿಜೇತರಾದ ಆರ್. ನಾರಾಯಣಸ್ವಾಮಿ ಹಾಗೂ ಅಂಗಾಂಗ ದಾನ ಮಾಡಿದ ಕುಟುಂಬಗಳ ಸದಸ್ಯರಿಗೆ ಪ್ರಶಂಸನಾ ಪತ್ರ ನೀಡಿ ಸನ್ಮಾನಿಸಲಾಯಿತು. ದೇಶದ ಏಕತೆ, ಸಮಾನತೆ ಮತ್ತು ಸಂವಿಧಾನದ ಮೌಲ್ಯಗಳನ್ನು ಕಾಪಾಡುವಲ್ಲಿ ನಾಗರಿಕರ ಪಾತ್ರ ಮಹತ್ವದ್ದು ಎಂದು ಸಚಿವರು ಈ ವೇಳೆ ತಿಳಿಸಿದರು.

ಈ ಸಮಾರಂಭದಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಸದಸ್ಯ ಡಾ. ಕೆ. ಸುಧಾಕರ್, ರಾಜ್ಯ 5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ, ಬಯಪ ಅಧ್ಯಕ್ಷ ವಿ. ಶಾಂತಕುಮಾರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ರಾಜಣ್ಣ, ಜಿಲ್ಲಾಧಿಕಾರಿ ಎ.ಬಿ. ಬಸವರಾಜು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಕೆ.ಎನ್. ಅನುರಾಧ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಎಂ.ವಿ. ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಚುನಾಯಿತ ಜನಪ್ರತಿನಿಧಿಗಳು, ವಿವಿಧ ಸಂಘಟನೆಗಳ ಮುಖಂಡರು ಮತ್ತು ಶಾಲಾ-ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ಭಾಷಣದ ಪ್ರಮುಖಾಂಶಗಳು**

ಸಚಿವ ಕೆ.ಹೆಚ್. ಮುನಿಯಪ್ಪ ಅವರು ತಮ್ಮ ಭಾಷಣದಲ್ಲಿ ಸರ್ಕಾರದ ವಿವಿಧ ಜನಪರ ಯೋಜನೆಗಳು ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಅಭಿವೃದ್ಧಿ ಸಾಧನೆಗಳ ಕುರಿತು ವಿವರಿಸಿದರು.

ಹಸಿವು ಮುಕ್ತ ಕರ್ನಾಟಕ ನಿರ್ಮಾಣದ ಗುರಿಯೊಂದಿಗೆ ಜಾರಿಗೆ ತಂದಿರುವ ಅನ್ನಭಾಗ್ಯ ಯೋಜನೆ ಜನಸಾಮಾನ್ಯರ ಆಹಾರ ಭದ್ರತೆಯಲ್ಲಿ ಮಹತ್ವದ ಮೈಲಿಗಲ್ಲಾಗಿದೆ ಎಂದು ಅವರು ಹೇಳಿದರು. ಜುಲೈ 2023ರಿಂದ ಆದ್ಯತಾ ಹಾಗೂ ಅಂತ್ಯೋದ್ಯಯ ಪಡಿತರ ಚೀಟಿದಾರರಿಗೆ ಪ್ರತಿ ಸದಸ್ಯರಿಗೆ ತಿಂಗಳಿಗೆ 10 ಕೆ.ಜಿ. ಆಹಾರ ಧಾನ್ಯ ವಿತರಿಸಲಾಗುತ್ತಿದ್ದು, ರಾಜ್ಯದಲ್ಲಿ 1.24 ಕೋಟಿ ಪಡಿತರ ಚೀಟಿಗಳ ಮೂಲಕ 4.41 ಕೋಟಿ ಫಲಾನುಭವಿಗಳು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಇದಕ್ಕಾಗಿ ಇದುವರೆಗೆ ರೂ. 11,821 ಕೋಟಿ ವೆಚ್ಚ ಮಾಡಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲೇ 2.24 ಲಕ್ಷ ಕುಟುಂಬಗಳು ಈ ಯೋಜನೆಯಿಂದ ಪ್ರಯೋಜನ ಪಡೆದಿವೆ.

ಮಹಿಳಾ ಸಬಲೀಕರಣದ ದೃಷ್ಟಿಯಿಂದ ಜಾರಿಗೆ ತಂದಿರುವ ಶಕ್ತಿ ಯೋಜನೆ ಮೂಲಕ ರಾಜ್ಯದಲ್ಲಿ 638 ಕೋಟಿ ಮಹಿಳಾ ಪ್ರಯಾಣಿಕರು ಉಚಿತ ಬಸ್ ಪ್ರಯಾಣದ ಸೌಲಭ್ಯ ಪಡೆದಿದ್ದು, ರೂ. 16,479 ಕೋಟಿ ವೆಚ್ಚವಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಾತ್ರವೇ 10.47 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ ಎಂದು ಮಾಹಿತಿ ನೀಡಿದರು.

ಗೃಹಜ್ಯೋತಿ ಯೋಜನೆ ಅಡಿಯಲ್ಲಿ 1.65 ಕೋಟಿ ಕುಟುಂಬಗಳಿಗೆ ಉಚಿತ ವಿದ್ಯುತ್ ಸೌಲಭ್ಯ ನೀಡಲಾಗಿದ್ದು, ರೂ. 21,239 ಕೋಟಿ ವೆಚ್ಚವಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 3.31 ಲಕ್ಷ ಗ್ರಾಹಕರು ಈಯೋಜನೆಗೆ ನೋಂದಾಯಿಸಿಕೊಂಡು ರೂ. 419 ಕೋಟಿ ಸಹಾಯಧನ ಪಡೆದಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಮೂಲಕ ಪ್ರತಿ ಮನೆಯಜಮಾನಿಗೆರೂ.2000ಸಹಾಯಧನವನ್ನು DBT ಮೂಲಕ ನೀಡಲಾಗುತ್ತಿದ್ದು, ರಾಜ್ಯದ 1.24 ಕೋಟಿ ಫಲಾನುಭವಿಗಳಿಗೆ ರೂ. 57,381 ಕೋಟಿ ನೇರ ನಗದು ವರ್ಗಾವಣೆ ಮಾಡಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 2.18 ಲಕ್ಷ ಮಹಿಳೆಯರಿಗೆ 24 ಕಂತುಗಳಲ್ಲಿ ರೂ. 915 ಕೋಟಿ ಜಮಾ ಮಾಡಲಾಗಿದೆ.

ಯುವಕರಿಗಾಗಿ ಜಾರಿಗೆ ತಂದಿರುವ ಯುವನಿಧಿ ಯೋಜನೆಯಡಿ ರಾಜ್ಯದಲ್ಲಿ 2.98 ಲಕ್ಷ ವಿದ್ಯಾವಂತ ನಿರುದ್ಯೋಗ ಯುವಕರಿಗೆ ರೂ. 874 ಕೋಟಿ ಪ್ರೋತ್ಸಾಹಧನ ನೀಡಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 3,163 ಯುವಕರು ಈ ಯೋಜನೆಯ ಲಾಭ ಪಡೆದಿದ್ದಾರೆ.

ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿಯೂ ಮಹತ್ವದ ಸಾಧನೆಗಳಾಗಿವೆ ಎಂದು ಸಚಿವರು ವಿವರಿಸಿದರು. ಕೃಷಿಭಾಗ್ಯ, ಕೃಷಿ ಯಾಂತ್ರೀಕರಣ, ತೋಟಗಾರಿಕೆ ಯೋಜನೆಗಳಡಿ ಕೋಟ್ಯಾಂತರ ರೂ. ಅನುದಾನ ವೆಚ್ಚ ಮಾಡಲಾಗಿದೆ. ಜೊತೆಗೆ ಬೃಹತ್ ಉದ್ಯೋಗ ಮೇಳಗಳ ಮೂಲಕ ಸುಮಾರು 4,250 ಯುವಕರಿಗೆ ಉದ್ಯೋಗ ಕಲ್ಪಿಸಲಾಗಿದೆ.

"ಊರಿಗೆ ಒಂದು ರುದ್ರಭೂಮಿ" ಯೋಜನೆಯಡಿ 936 ಗ್ರಾಮಗಳಿಗೆ ಜಮೀನು ಒದಗಿಸಲಾಗಿದ್ದು, ಘನ ತ್ಯಾಜ್ಯ ವಿಲೇವಾರಿ ಘಟಕಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಹಾಲು ಉತ್ಪಾದನೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ರಾಜ್ಯದಲ್ಲಿ 8ನೇ ಸ್ಥಾನದಲ್ಲಿದ್ದು, ಪ್ರತಿದಿನ 4.60 ಲಕ್ಷ ಲೀಟರ್ ಹಾಲು ಸಂಗ್ರಹವಾಗುತ್ತಿದೆ ಎಂದು ತಿಳಿಸಿದರು.

ಕೈಗಾರಿಕಾ ಅಭಿವೃದ್ಧಿಗೆ 162 ಯೋಜನೆಗಳಿಗೆ ಅನುಮೋದನೆ ನೀಡಿ ರೂ. 1,421 ಕೋಟಿ ಬಂಡವಾಳ ಹೂಡಿಕೆ ಆಕರ್ಷಿಸಲಾಗಿದ್ದು, 9,819 ಉದ್ಯೋಗಗಳು ಸೃಷ್ಟಿಯಾಗಿವೆ. ಮುಖ್ಯಮಂತ್ರಿ ಆಶ್ರಯ ಯೋಜನೆ, ಪೋಡಿ ಮುಕ್ತ ಗ್ರಾಮ, ಭೂ ಸುರಕ್ಷಾ ಯೋಜನೆ, ಉದ್ಯೋಗ ಖಾತರಿ ಯೋಜನೆ ಸೇರಿದಂತೆ ಹಲವು ಯೋಜನೆಗಳಡಿ ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದರು.

ಇದಲ್ಲದೆ ದೇವನಹಳ್ಳಿ ಹಾಗೂ ವಿಜಯಪುರ ಪಟ್ಟಣಗಳಲ್ಲಿ ರಸ್ತೆ, ವಿದ್ಯುತ್, ಪೊಲೀಸ್ ಠಾಣೆ, ಕ್ರೀಡಾಂಗಣ, ವಸತಿ ನಿಲಯ, ನೀರಾವರಿ ಹಾಗೂ ನಗರಾಭಿವೃದ್ಧಿ ಸಂಬಂಧಿಸಿದ ಬಹುಕೋಟಿ ರೂ.ಗಳ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಸಚಿವರು ವಿವರಿಸಿದರು.

ಒಟ್ಟಾರೆ, 77ನೇ ಗಣರಾಜ್ಯೋತ್ಸವ ಕಾರ್ಯಕ್ರಮವು ಸರ್ಕಾರದ ಸಾಧನೆಗಳನ್ನು ಜನತೆಗೆ ತಲುಪಿಸುವ ಜೊತೆಗೆ ದೇಶದ ಸಂವಿಧಾನಾತ್ಮಕ ಮೌಲ್ಯಗಳ ಬಗ್ಗೆ ಜಾಗೃತಿ ಮೂಡಿಸಿದ ಅರ್ಥಪೂರ್ಣ ಸಮಾರಂಭವಾಗಿ ಮೂಡಿಬಂತು.

# ಕ್ರಿಕೆಟ್ ವಿಚಾರಕ್ಕೆ ಶುರುವಾದ ಗಲಾಟೆ ಸಾವಲ್ಲಿ ಅಂತ್ಯ





**ಆನೇಕಲ್:** ಕ್ರಿಕೆಟ್ ವಿಚಾರಕ್ಕೆ ಶುರುವಾದ ಗಲಾಟೆ ಯುವಕನೋರ್ವನ ಸಾವಲ್ಲಿ ಅಂತ್ಯವಾಗಿರುವ ಆಘಾತಕಾರಿ ಘಟನೆ ಬೆಂಗಳೂರು ಹೊರವಲಯ ಆನೇಕಲ್ ತಾಲೂಕಿನ ಕಮ್ಮಸಂದ್ರದಲ್ಲಿ ನಡೆದಿದೆ. ಹೆಬ್ಬಗೋಡಿ ನಿವಾಸಿ ಪ್ರಶಾಂತ್(28) ಮೃತ ದುರ್ದೈವಿಯಾಗಿದ್ದಾನೆ. ಮದ್ಯದ ನಶೆಯಲ್ಲಿ ಇಬ್ಬರು ಯುವಕರ ನಡುವೆ ಕಿರಿಕ್ ಆಗಿದೆ ಎನ್ನಲಾಗಿದ್ದು, ಪ್ರಶಾಂತ್ ಮತ್ತು ರೋಷನ್ ಹೆಗ್ಡೆ ಎಂಬವರು ಪರಸ್ಪರ ಕಿತ್ತಾಡಿಕೊಂಡಿದ್ದಾರೆ. ಈ ವೇಳೆ ರೋಷನ್ ಕಾರು ಹತ್ತಿ ಹೊರಟರೂ ಪ್ರಶಾಂತ್ ಆತನ ಕಾರಿನ ಫೂಟ್ ಬೋರ್ಡ್ ಮೇಲೆ ಹತ್ತಿ ಕಿರಿಕ್ ಮುಂದುವರಿಸಿದ್ದ. ಅವಾಚ್ಯ ಶಬ್ದಗಳಿಂದ ನಿಂದಿಸಿದ್ದ. ಇದರಿಂದ ರೊಚ್ಚಿಗೆದ್ದ ರೋಷನ್ ಅಡ್ಡಾದಿಟ್ಟಿ ಕಾರು ಚಾಲನೆ ಮಾಡಿದ್ದು, ನಿಯಂತ್ರಣ ತಪ್ಪಿದ ಕಾರು ಗೋಡೆಗೆ ಉಜ್ಜಿ ಬಳಿಕ ಮರಕ್ಕೆ ಡಿಕ್ಕಿಯಾಗಿದೆ. ಈ ವೇಳೆ ಪ್ರಶಾಂತ್ ಮೃತಪಟ್ಟಿದ್ದರೆ, ರೋಷನ್‌ಗೆ ಗಾಯಗಳಾಗಿವೆ.

ಇನ್ನು ಅಪಘಾತದ ವೇಳೆ ಗಂಭೀರ ಗಾಯಗೊಂಡಿದ್ದ ಪ್ರಶಾಂತ್ ಸ್ಥಳದಲ್ಲೇ ಮೃತಪಟ್ಟಿದ್ದರೆ, ರೋಷನ್‌ಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ. ಅಪಘಾತದ ಕೊನೆಯ ಕ್ಷಣಗಳು ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಕಾರು ನಿಲ್ಲಿಸುವಂತೆ ಪ್ರಶಾಂತ್ ಹೇಳಿದ್ದರೂ ರೋಷನ್ ವೇಗವಾಗಿ ಕಾರು ಚಾಲನೆ ಮಾಡಿದ್ದಾನೆ. ಅಪಘಾತ ನಡೆಯುವ ವೇಳೆ ಪ್ರಶಾಂತ್ ಕಾರಿನ ಎಡಭಾಗದ ಕಿಡಕಿ ಹಿಡಿದು ನೇತಾಡುತ್ತಿದ್ದ. ಹೀಗಾಗಿ ಮರ ಮತ್ತು ಕಾಂಪೌಂಡ್ ಗೋಡೆಯ ನಡುವೆ ಸಿಲುಕಿದ್ದ ಪ್ರಶಾಂತ್ ತಲೆಗೆ ಗಂಭೀರ ಗಾಯವಾಗಿತ್ತು ಎನ್ನಲಾಗಿದೆ. ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ಪ್ರಕರಣ ದಾಖಲಾಗಿದೆ.

ಮಗ ಪ್ರಶಾಂತ್ ಸಾವಿನಿಂದಾಗಿ ತಾಯಿ ಕಂಗಾಲಾಗಿದ್ದು, ಇದು ಅಪಘಾತದ ಅಲ್ಲ ಕೊಲೆ ಎಂದು ಆರೋಪಿಸಿದ್ದಾರೆ. ಕ್ರಿಕೆಟ್ ಬಗ್ಗೆ ಮಗ ಪ್ರಶಾಂತ್ ಹುಚ್ಚು ಪ್ರೀತಿ ಹೊಂದಿದ್ದ. ಕಮ್ಮಸಂದ್ರದಲ್ಲಿ ನಡೆದ ಕ್ರಿಕೆಟ್ ಟೂರ್ನಮೆಂಟ್ ನಲ್ಲಿ ಪ್ರಶಾಂತ್ ಆಟವಾಡಿದ್ದ ಕ್ರಿಕೆಟ್ ತಂಡ ಸೋತಿತ್ತು. ಈ ವೇಳೆ ಅಲ್ಲಿದ್ದ ರೋಷನ್ ಮತ್ತು ಪ್ರಶಾಂತ್ ನಡುವೆ ಕಿರಿಕ್ ಆಗಿತ್ತು. ಆದಾದ ಬಳಿಕ ಮನೆಗೆ ಬಂದಿದ್ದ ಪ್ರಶಾಂತ್, ಕ್ರಿಕೆಟ್ ಟೂರ್ನಮೆಂಟ್ ಸೋತಿರೋದಾಗಿ ಬೇಸರದಿಂದ ಹೇಳಿಕೊಂಡಿದ್ದ. ನಿನ್ನೆ ಕಮ್ಮಸಂದ್ರದ ಮೈದಾನಕ್ಕೆ ಹೋಗಿದ್ದ ವೇಳೆ ಮತ್ತೆ ಪ್ರಶಾಂತ್ ಮತ್ತು ರೋಷನ್ ನಡುವೆ ಗಲಾಟೆ ಆಗಿದೆ. ಗಲಾಟೆ ಬಳಿಕ ಕಾರಿನಲ್ಲಿ ತಪ್ಪಿಸಿಕೊಂಡು ಹೋಗಲು ರೋಷನ್ ಯತ್ನಿಸಿದ್ದು, ಕಾರು ನಿಲ್ಲಿಸಿದ್ದರೆ ಪ್ರಶಾಂತ್ ಬದುಕುಳಿಯುತ್ತಿದ್ದ. ಹೀಗಾಗಿ ಕೊಲ್ಲುವ ಉದ್ದೇಶದಿಂದಲೇ ಅಪಘಾತ ಮಾಡಿದ್ದಾರೆ ಎಂದು ಕುಟುಂಬಸ್ಥರು ದೂರಿದ್ದಿದಾರೆ. ಮೃತ ಪ್ರಶಾಂತ್ ತಾಯಿ ನೀಡಿರುವ ದೂರಿನ ಅನ್ವಯ ಹೆಬ್ಬಗೋಡಿ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.